# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 1012(1098)

ಸದಸ್ಯರ ಹೆಸರು : ಶ್ರೀ ಎಸ್.ಎಲ್.ಭೋಜೇಗೌಡ (ಶಿಕ್ಷಕರ ಕ್ಷೇತ್ರ)

ಉತ್ತರಿಸುವ ದಿನಾಂಕ : 15.12.2023

ಉತ್ತರಿಸುವವರು : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ಎಲ್ಲಾ ವೃಂದದ ಖಾಲಿಯಿರುವ ಅಧಿಕಾರಿಗಳ ಹುದ್ದೆಗಳೆಷ್ಟು | ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯಲ್ಲಿ ವರ್ಗಾವಾರು ಕಾರ್ಯನಿರ್ವಹಿಸುತ್ತಿರುವ ಮತ್ತು ಖಾಲಿ ಇರುವ ಅಧಿಕಾರಿ ಹುದ್ದೆಗಳ ಮಾಹಿತಿಯು ಈ ಕೆಳಕಂಡಂತೆ ಇರುತ್ತದೆ: |

| ವರ್ಗಾವಾರು | ಖಾಲಿ ಹುದ್ದೆಗಳ ಸಂಖ್ಯೆ |
|---|---|
| ಗ್ರೂಪ್-ಎ | 207 |
| ಗ್ರೂಪ್-ಬಿ | 755 |
| ಗ್ರೂಪ್-ಸಿ | 7885 |
| ಗ್ರೂಪ್-ಡಿ | 1494 |
| **ಒಟ್ಟು** | 10341 |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಆ) | ಸದರಿ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳಿಂದ ಗ್ರಾಮೀಣ ಭಾಗದಲ್ಲಿ ಗುಣಮಟ್ಟದ ರಸ್ತೆಗಳು ಮತ್ತು ಚರಂಡಿಗಳ ಕಾಮಗಾರಿ ಹಾಗೂ ಸಾರ್ವಜನಿಕರಿಗೆ ದೊರಕಬೇಕಾದ ಸರ್ಕಾರದ ಸೌಲಭ್ಯಗಳು ವಿಳಂಬವಾಗುತ್ತಿರುವುದರಿಂದ ಖಾಲಿಯಿರುವ ಎಲ್ಲಾ ವೃಂದದ ಅಧಿಕಾರಿಗಳನ್ನು ಕೂಡಲೇ ಭರ್ತಿ ಮಾಡಲು ತೆಗೆದುಕೊಂಡ ಕ್ರಮವೇನು? | ಖಾಲಿ ಇರುವ ಎಲ್ಲಾ ವೃಂದದ ಅಧಿಕಾರಿಗಳನ್ನು ಭರ್ತಿ ಮಾಡಲು ತೆಗೆದುಕೊಂಡ ಕ್ರಮದ ಬಗ್ಗೆ ಮಾಹಿತಿಯನ್ನು ಅನುಬಂಧದಲ್ಲಿ ನೀಡಲಾಗಿದೆ. |

**ಕಡತ ಸಂಖ್ಯೆ: ಗ್ರಾಅಪ 114 ಸ್ವೀಮರ 2023**

**(ಪ್ರಿಯಾಂಕ್ ಖರ್ಗೆ)**
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಹಾಗೂ ಮಾಹಿತಿ
ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು

# ಅನುಬಂಧ

## ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ

ಕರ್ನಾಟಕ ಲೋಕಸೇವಾ ಆಯೋಗವು ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಈ ಕೆಳಕಂಡ ತಾಂತ್ರಿಕ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳ ತಾತ್ಕಾಲಿಕ ಪಟ್ಟಿಯನ್ನು ಪ್ರಕಟಿಸಿದೆ:-

1. ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಒಟ್ಟು 25 ಹುದ್ದೆಗಳು:
18+07 ಹೈ.ಕ. ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ದಿನಾಂಕ:22.09.2023ರಂದು ಪ್ರಕಟಿಸಲಾಗಿದೆ.

2. ಸಹಾಯಕ ಇಂಜಿನಿಯರ್ (ಗ್ರೇಡ್-1)ಒಟ್ಟು 288 ಹುದ್ದೆಗಳು:
229+56 ಹೈ.ಕ. ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ದಿನಾಂಕ:17.09.2023ರಂದು ಪ್ರಕಟಿಸಲಾಗಿದೆ.

3. ಕಿರಿಯ ಇಂಜಿನಿಯರ್ ಒಟ್ಟು 136 ಹುದ್ದೆಗಳು:
89+47 ಹೈ.ಕ. ಹುದ್ದೆಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ದಿನಾಂಕ:16.08.2023ರಂದು ಪ್ರಕಟಿಸಲಾಗಿದೆ.

ಗ್ರೂಪ್-ಸಿ ಹುದ್ದೆಗಳಿಗೆ ಸಂಬಂಧಿಸಿದಂತೆ, ಕಲ್ಯಾಣ ಕರ್ನಾಟಕ ವೃಂದದ ನೇರ ನೇಮಕಾತಿ ಕೋಟಾದಡಿ ಲಭ್ಯವಿರುವ ಒಟ್ಟು 170 ವಿವಿಧ ವೃಂದದ ಹುದ್ದೆಗಳಿಗೆ ನೇರ ನೇಮಕಾತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲು ನಿರ್ದೇಶಕರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, ಬೆಂಗಳೂರು ಇವರಿಗೆ ತಿಳಿಸಲಾಗಿದೆ.

## ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ:-

ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆಯಲ್ಲಿ ಈ ಕೆಳಕಂಡ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ವಿಕಲ ಚೇತನರಿಗೆ ಮೀಸಲಾತಿಗಾಗಿ ರೋಷ್ಟರ್ ಬಿಂದುವನ್ನು ಗುರುತಿಸಲು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಗೆ ದಿನಾಂಕ:01.07.2023 ರಂದು ಪ್ರಸ್ತಾವನೆ ಕಳುಹಿಸಲಾಗಿದೆ. ಸದರಿ ಇಲಾಖೆಯಿಂದ ಅಧಿಸೂಚನೆ ಹೊರಡಿಸಿದ ನಂತರ ಆರ್ಥಿಕ ಇಲಾಖೆಯ ಸಹಮತಿ ಪಡೆದು ನೇಮಕಾತಿ ಪ್ರಸ್ತಾವನೆಯನ್ನು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಸಲ್ಲಿಸಲಾಗುವುದು.

| ಹುದ್ದೆಗಳು | ಸಂಖ್ಯೆ |
|---|---|
| ಸಹಾಯಕ ಇಂಜಿನಿಯರ್ | 38 |
| ಕಿರಿಯ ಇಂಜಿನಿಯರ್ | 230 |
| ಪ್ರಥಮ ದರ್ಜೆ ಲೆಕ್ಕ ಸಹಾಯಕ | 02 |
| ದ್ವಿತೀಯ ದರ್ಜೆ ಲೆಕ್ಕ ಸಹಾಯಕ | 06 |
| ಶೀಘ್ರಲಿಪಿಗಾರರು | 07 |
| ಬೆರಳಚ್ಚುಗಾರರು | 40 |
| ವಾಹನ ಚಾಲಕರು | 31 |
| ಗ್ರೂಪ್‌ಡಿ | 76 |

ಕಲ್ಯಾಣ ಕರ್ನಾಟಕ ವೃಂದದ 05 ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಹುದ್ದೆಗೆ ನೇರನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳುವ ಬಗ್ಗೆ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲು ಕ್ರಮವಹಿಸಲಾಗುತ್ತಿದೆ.

## ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ

ಪ್ರಸ್ತುತ ಕಾರ್ಯನಿರ್ವಾಹಕ ಅಧಿಕಾರಿ / ಸಹಾಯಕ ಕಾರ್ಯದರ್ಶಿ ವೃಂದದಲ್ಲಿ ನೇರ ನೇಮಕಾತಿ ಕೋಟಾದಡಿ 59 ಹುದ್ದೆಗಳು ಖಾಲಿ ಇದ್ದು ಅವುಗಳ ಪೈಕಿ 2023-24 ನೇ ಸಾಲಿನಲ್ಲಿ 20 ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಆರ್ಥಿಕ ಇಲಾಖೆಯು ಸಹಮತಿ ನೀಡಿರುತ್ತದೆ. ಸದರಿ 20 ಹುದ್ದೆಗಳ ಪೈಕಿ ಮಿಕ್ಕುಳಿದ ಮೂಲ ವೃಂದದ 16 ಮತ್ತು ಕಲ್ಯಾಣ ಕರ್ನಾಟಕ ಸ್ಥಳೀಯ ವೃಂದದ 04 ಹುದ್ದೆಗಳನ್ನು ಕರ್ನಾಟಕ ಗೆಜೆಟೆಡ್ ಪ್ರೊಬೆಷನರುಗಳು ನೇಮಕಾತಿ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ) ನಿಯಮಗಳು 1997 ರಡಿಯಲ್ಲಿ ನೇರ ನೇಮಕಾತಿ ಮೂಲಕ ಭರ್ತಿ ಮಾಡಿಕೊಳ್ಳಲು ದಿನಾಂಕ: **16.11.2023** ರಂದು ಪ್ರಸ್ತಾವನೆಯನ್ನು ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆಗೆ ಕಳುಹಿಸಿದೆ.

ಮುಂದುವರೆದು, ಮುಂಬಡ್ತಿ ಕೋಟಾದಡಿ ಲಭ್ಯವಾಗುವ ಹುದ್ದೆಗಳಿಗೆ ವೃಂದ ಮತ್ತು ನೇಮಕಾತಿ ನಿಯಮಗಳನುಸಾರ ಖಾಲಿ ಹುದ್ದೆಗಳು ಮತ್ತು ಅರ್ಹ ಅಧಿಕಾರಿಗಳ ಲಭ್ಯತೆಗನುಗುಣವಾಗಿ ಕಾಲಕಾಲಕ್ಕೆ ಮುಂಬಡ್ತಿ ಮೂಲಕ ಭರ್ತಿ ಮಾಡಲಾಗುತ್ತದೆ.

## ಗ್ರಾಮ ಪಂಚಾಯತ್

ಖಾಲಿ ಇರುವ ಗ್ರಾಮ ಪಂಚಾಯಿತಿ, ಪಂಚಾಯತಿ ಅಭಿವೃದ್ದಿ ಅಧಿಕಾರಿ ಹುದ್ದೆಗೆ ಸಮೀಪದಲ್ಲಿರುವ ಗ್ರಾಮ ಪಂಚಾಯಿತಿ, ಪಂಚಾಯಿತಿ ಅಭಿವೃದ್ದಿ ಅಧಿಕಾರಿ/ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ವೃಂದದ ನೌಕರರಿಗೆ ಅಧಿಕ ಪ್ರಭಾರವಹಿಸಲು ನಿರ್ದೇಶನ ನೀಡಲಾಗಿದೆ.

ನೇರ ನೇಮಕಾತಿ ಕೋಟಾದಡಿ ಖಾಲಿಯಿರುವ ಪಂಚಾಯಿತಿ ಅಭಿವೃದ್ದಿ ಅಧಿಕಾರಿ ವೃಂದದ 256 ಹುದ್ದೆಗಳು, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1 ವೃಂದದ 220 ಹುದ್ದೆಗಳು, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ವೃಂದದ 343 ಹುದ್ದೆಗಳು ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದದ 105 ಹುದ್ದೆಗಳಿಗೆ ನೇಮಕಾತಿ ಮಾಡಲು ಕರ್ನಾಟಕ ಲೋಕಸೇವಾ ಆಯೋಗಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.

ಪಂಚಾಯಿತಿ ಅಭಿವೃದ್ದಿ ಅಧಿಕಾರಿ ವೃಂದಕ್ಕೆ ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗೇಡ್-1 ವೃಂದದ ಅರ್ಹ ನೌಕರರು ಲಭ್ಯವಾದಂತೆ ಜೇಷ್ಠತೆ ಮತ್ತು ಅರ್ಹತೆ ಆಧಾರದ ಮೇಲೆ ಮುಂಬಡ್ತಿ ನೀಡಲು ಕ್ರಮ ವಹಿಸಲಾಗುತ್ತಿದೆ.

ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-1, ಗ್ರಾಮ ಪಂಚಾಯಿತಿ ಕಾರ್ಯದರ್ಶಿ ಗ್ರೇಡ್-2 ಮತ್ತು ದ್ವಿತೀಯ ದರ್ಜೆ ಲೆಕ್ಕ ಸಹಾಯಕ ವೃಂದಕ್ಕೆ ಜಿಲ್ಲಾ ಪಂಚಾಯಿತಿ ಉಪಕಾರ್ಯದರ್ಶಿ (ಅಭಿವೃದ್ದಿ) ರವರು ನೇಮಕಾತಿ ಪ್ರಾಧಿಕಾರ ಆಗಿದ್ದು ಖಾಳಿ ಹುದ್ದೆಗೆ ಎದುರಾಗಿ ಮುಂಬಡ್ತಿ / ಸೇವೆಯೊಳಗೆ ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಸರ್ಕಾರದಿಂದ ಎಲ್ಲಾ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಲಾಗಿದೆ.

## ಕರ್ನಾಟಕ ಪಂಚಾಯತ್ ರಾಜ್ ಆಯುಕ್ತಾಲಯ

ಜಿಲ್ಲಾ/ತಾಲ್ಲೂಕು ಪಂಚಾಯತಿಗಳ ಗ್ರೂಪ್—ಸಿ ವೃಂದದ 100 ಪ್ರಥಮ ದರ್ಜೆ ಸಹಾಯಕರ ಹಾಗೂ 200 ದ್ವಿತೀಯ ದರ್ಜೆ ಸಹಾಯಕರ ಹುದ್ದೆಗಳನ್ನು ಭರ್ತಿ ಮಾಡಲು ಆರ್ಥಿಕ ಇಲಾಖೆಯು ಸಹಮತಿ ನೀಡಿದ್ದು ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿರುತ್ತದೆ.

ಕರ್ನಾಟಕ ಸಾಮಾನ್ಯ ಸೇವೆ (ಪಂಚಾಯತ್ ರಾಜ್ ವಿಭಾಗ) (ವೃಂದ ಮತ್ತು ನೇಮಕಾತಿ) ನಿಯಮಗಳು 2020 ರಲ್ಲಿ ಬೆರಳಚ್ಚುಗಾರ,ವಾಹನ ಚಾಲಕ ಮತ್ತು ಗ್ರೂಪ್-ಡಿ ಹುದ್ದೆಗಳಿಗೆ ಭವಿಷ್ಯವರ್ತಿಯಾಗಿ ಹೊರಗುತ್ತಿಗೆ ಸಂಸ್ಥೆಯ ಮೂಲಕ ಸೇವೆ ಪಡೆಯಲು ಅವಕಾಶವನ್ನು

ಕಲ್ಪಿಸಲಾಗಿದ್ದು ಅದರಂತೆ ಸದರಿ ಹುದ್ದೆಗಳ ಎದುರಾಗಿ ಅಗತ್ಯತೆಗೆ ಅನುಗುಣವಾಗಿ ಹೊರಗುತ್ತಿಗೆ ಸಂಸ್ಥೆಗಳ ಮುಖೇನ ಸೇವೆಯನ್ನು ಪಡೆಯಲಾಗುತ್ತಿದೆ.

## ಕರ್ನಾಟಕ ರೂರಲ್ ಇನ್‌ಫ್ರಾಸ್ಟ್ರಕ್ಚರ್ ಡೆವಲಪ್‌ಮೆಂಟ್ ಲಿಮಿಟೆಡ್

ಕರ್ನಾಟಕ ಗ್ರಾಮೀಣ ಮೂಲಸೌಲಭ್ಯ ಅಭಿವೃದ್ಧಿ ಸಂಸ್ಥೆಯಲ್ಲಿ ಖಾಲಿ ಇರುವ ಹುದ್ದೆಗಳ ಪೈಕಿ ಮೊದಲ ಹಂತದಲ್ಲಿ ಈ ಕೆಳಕಂಡ 74 ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರವು ಅನುಮೋದನೆ ನೀಡಿದ್ದು, ಸದರಿ 74 ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗಿರುತ್ತದೆ. ಈವರೆವಿಗೂ 44 ಅಭ್ಯರ್ಥಿಗಳು ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ. ಇನ್ನುಳಿದ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ಆಯ್ಕೆಯಾಗಿರುವ ಇತರೆ 30 ಅಭ್ಯರ್ಥಿಗಳು ಸಲ್ಲಿಸಿರುವ ದಾಖಲಾತಿ ಪರಿಶೀಲನೆಗೆ ನೈಜತೆ ಪ್ರಮಾಣ ಪತ್ರ ಅವಶ್ಯವಿದ್ದು, ಸಂಬಂಧಿಸಿದ ಪ್ರಾಧಿಕಾರಗಳಿಗೆ ಸಲ್ಲಿಸಲಾಗಿರುತ್ತದೆ.

| ಕ್ರ.ಸಂ | ಹುದ್ದೆ | ಭರ್ತಿ ಮಾಡಲಾದ ಹುದ್ದೆ | ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುವವರು | ದಾಖಲಾತಿ ಪರಿಶೀಲನೆಯಲ್ಲಿರುವ ಅಭ್ಯರ್ಥಿಗಳ ವಿವರ |
|---|---|---|---|---|
| 1 | ಸಹಾಯಕ ಅಭಿಯಂತರರು ಗ್ರೇಡ್-1(ಸಿವಿಲ್) | 42 | 24 | 18 |
| 2 | ಕಿರಿಯ ಅಭಿಯಂತರರು (ಸಿವಿಲ್) | 17 | 13 | 04 |
| 3 | ಪ್ರಥಮ ದರ್ಜೆ ಸಹಾಯಕರು | 05 | 05 | 00 |
| 4 | ದ್ವಿತೀಯ ದರ್ಜೆ ಸಹಾಯಕರು | 10 | 02 | 08 |
| **ಒಟ್ಟು** | | **74** | **44** | **30** |

ಎರಡನೇ ಹಂತದಲ್ಲಿ ಕಲ್ಯಾಣ ಕರ್ನಾಟಕ ಪ್ರದೇಶಕ್ಕೆ ಸೇರಿದ 23 ಹುದ್ದೆಗಳನ್ನು ಹಾಗೂ ಉಳಿದ ಮೂಲದ 105 ವಿವಿಧ ವೃಂದದ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರದ ಅನುಮೋದನೆಗೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಸದರಿ ಎರಡು ಪ್ರಸ್ತಾವನೆಗಳ ಪೈಕಿ ಕಲ್ಯಾಣ ಕರ್ನಾಟಕ ಪ್ರದೇಶದ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಲು ಸರ್ಕಾರವು ಈಗಾಗಲೇ ಅನುಮೋದನೆ ನೀಡಿರುತ್ತದೆ. ಉಳಿದ ಮೂಲದ 105 ಹುದ್ದೆಗಳನ್ನು ಭರ್ತಿ ಮಾಡುವ ಪ್ರಸ್ತಾವನೆ ಸರ್ಕಾರದ ಪರಿಶೀಲನೆಯಲ್ಲಿದ್ದು, ಸದರಿ ಎರಡು ನೇಮಕಾತಿ ಪ್ರಕ್ರಿಯೆಯನ್ನು ಒಂದೇ ಸಲ ತೆಗೆದುಕೊಳ್ಳಲಾಗುವುದು ಹಾಗೂ ಕಂಪ್ಯೂಟರ್ ಅಸಿಸ್ಟೆಂಟ್ ಗ್ರೇಡ್-2, ವಾಹನ ಚಾಲಕರು ಮತ್ತು ಗ್ರೂಪ್-ಡಿ ಹುದ್ದೆಗಳನ್ನು ಹೊರಗುತ್ತಿಗೆ ಮೇಲೆ ನೇಮಿಸಿಕೊಳ್ಳಲಾಗುತ್ತಿದೆ.

ಸಹಾಯಕ ಕಾರ್ಯಪಾಲಕ – ಅಭಿಯಂತರರು ಗ್ರೇಡ್-1 (ಸಿವಿಲ್) ವೃಂದದಲ್ಲಿನ ನೇರ - ನೇಮಕಾತಿಯ ಹುದ್ದೆಗಳನ್ನು ನಿಯಮಾನುಸಾರ ಭರ್ತಿ ಮಾಡಲು ಪ್ರಸ್ತಾವನೆ ಬಂದಿದೆ. ಇದರಲ್ಲಿ 06 ಹುದ್ದೆಗಳು ಉಳಿದ ಮೂಲ ಹಾಗೂ 01 ಹುದ್ದೆ ಕಲ್ಯಾಣ-ಕರ್ನಾಟಕ ಪ್ರದೇಶಕ್ಕೆ ಸೇರಿರುತ್ತದೆ. ಕಲ್ಯಾಣ-ಕರ್ನಾಟಕ ಪ್ರದೇಶದ 01 ಹುದ್ದೆಯನ್ನು ಭರ್ತಿ ಮಾಡಲು ಸರ್ಕಾರದ ಅನುಮೋದನೆ ನೀಡಲಾಗಿದೆ ಹಾಗೂ ಉಳಿದ ಮೂಲ ವೃಂದದ ಹುದ್ದೆಗಳ ಭರ್ತಿಗಾಗಿ ಕ್ರಮವಹಿಸಲಾಗಿದೆ.

ಅಧೀಕ್ಷಕ ಅಭಿಯಂತರರು (ಸಿವಿಲ್) ಮತ್ತು ಕಾರ್ಯಪಾಲಕ ಅಭಿಯಂತರರು (ಸಿವಿಲ್) ವೃಂದದಲ್ಲಿ ಹಾಲಿ ಖಾಲಿ ಇರುವ ಹುದ್ದೆಗಳಿಗೆ ಪದೋನ್ನತಿಗಾಗಿ ಕನಿಷ್ಠ 03 ವರ್ಷಗಳ ಸೇವಾ ಅವಧಿ ಗೊತ್ತುಪಡಿಸಲಾಗಿದ್ದು, ಜನವರಿ-2024ಕ್ಕೆ ಸೇವಾ ನಿರತ ಕಾರ್ಯಪಾಲಕ/ ಸಹಾಯಕ ಕಾರ್ಯಪಾಲಕ ಅಭಿಯಂತರರುಗಳು ಕನಿಷ್ಠ ಸೇವಾ ಅವಧಿ ಪೂರೈಸಲಿದ್ದು, ಅರ್ಹ

ಅಭ್ಯರ್ಥಿಗಳಿಗೆ ತಕ್ಷಣ ಪದೋನ್ನತಿ ನೀಡಿ, ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗುತ್ತದೆ.

ಕಾರ್ಯಪಾಲಕ ಅಭಿಯಂತರರು (ಸ್ಟ್ರಕ್ಚರಲ್ ಡಿಸೈನ್) ಹಾಗೂ ಸಹಾಯಕ ಕಾರ್ಯಪಾಲಕ ಅಭಿಯಂತರರು (ಸ್ಟ್ರಕ್ಚರಲ್ ಡಿಸೈನ್) ಹುದ್ದೆಗೆ ಸಂಸ್ಥೆಯ ಸಿ&ಆರ್ ನಿಯಮಾವಳಿಯಲ್ಲಿ ಗೊತ್ತುಪಡಿಸಿರುವ ಶೈಕ್ಷಣಿಕ ವಿದ್ಯಾರ್ಹತೆ ಪಡೆದಿರುವ ಅಧಿಕಾರಿಗಳು ಪ್ರಸಕ್ತ ಲಭ್ಯವಿರುವುದಿಲ್ಲ.

ಕಂಪನಿ ಕಾರ್ಯದರ್ಶಿ ಹುದ್ದೆಗೆ ಸಂಸ್ಥೆಯ ಸಿ&ಆರ್ ನಿಯಮಾವಳಿಯಲ್ಲಿ ಗೊತ್ತುಪಡಿಸಿರುವ ಶೈಕ್ಷಣಿಕ ವಿದ್ಯಾರ್ಹತೆ ಪಡೆದಿರುವ ಹಾಗೂ ಸಾಕಷ್ಟು ಅನುಭವವಿರುವ ಅಧಿಕಾರಿಯನ್ನು ಪ್ರಸ್ತುತ ಗೌರವಧನದ ಆಧಾರದ ಮೇಲೆ ನೇಮಿಸಿಕೊಳ್ಳಲಾಗಿದೆ